**All India Radio: Bangalore**
**Regional Bulletin In Kannada**
**22.05.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.05.2025 / 2.30 p.m.**
**<><><><>**

ಮುಖ್ಯಾಂಶಗಳು

1. ಅಮೃತ ಭಾರತ ಯೋಜನೆ; ಆಧುನೀಕರಣಗೊಂಡ ರಾಜ್ಯದ ೫ ರೈಲು ನಿಲ್ದಾಣಗಳನ್ನು ಲೋಕಾರ್ಪಣೆಗೊಳಿಸಿದ ಪ್ರಧಾನಿ ನರೇಂದ್ರ ಮೋದಿ
2. ಆಸ್ಪತ್ರೆ ಆವರಣಗಳಲ್ಲಿ ಪ್ರಧಾನಮಂತ್ರಿ ಜನೌಷಧ ಕೇಂದ್ರಗಳನ್ನು ಸ್ಥಗಿತಗೊಳಿಸದಂತೆ ರಾಜ್ಯ ಸರ್ಕಾರಕ್ಕೆ ಸಂಸದ ಬಸವರಾಜ ಬೊ ಮ್ಮಾಯಿ ಆಗ್ರಹ
3. ಸರ್ಕಾರಿ ನಿಯಮಾವಳಿ ಉಲ್ಲಂಘಿಸುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಕಠಿಣ ಕ್ರಮ - ಚಿತ್ರದುರ್ಗ ಜಿಲ್ಲಾಧಿಕಾರಿ
4. ಮುಂದಿನ ೫ ದಿನಗಳ ಕಾಲ ರಾಜ್ಯದ ಕರಾವಳಿಯಲ್ಲಿ ಭಾರೀ ಮಳೆ

<><><><>

ಕೇಂದ್ರ ಸರ್ಕಾರದ ಮಹಾತ್ವಾಕಾಂಕ್ಷೆಯ ಅಮೃತ ಭಾರತ ರೈಲು ನಿಲ್ದಾಣ ಯೋಜನೆಯಡಿ ಸದ್ಯ ಕಾಮಗಾರಿ ಪೂರ್ಣಗೊಂಡ ಕರ್ನಾಟಕದ ೫ ರೈಲು ನಿಲ್ದಾಣಗಳು ಸೇರಿದಂತೆ ದೇಶದ ೧೦೩ ರೈಲು ನಿಲ್ದಾಣಗಳನ್ನು ಪ್ರಧಾನಿ ನರೇಂದ್ರ ಮೋದಿ, ಇಂದು ವರ್ಚುವಲ್ ಮೂಲಕ ಲೋಕಾರ್ಪಣೆಗೊಳಿಸಿದರು. ೧೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೮೬ ಜಿಲ್ಲೆಗಳಲ್ಲಿ ಈ ರೈಲು ನಿಲ್ದಾಣಗಳನ್ನು ಒಂದು ಸಾವಿರದ ನೂರು ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗಿದೆ. ರಾಜಸ್ಥಾನದ ಬಿಕಾನೇರ್‌ನಲ್ಲಿ ನಡೆದ ಸಮಾರಂಭದಲ್ಲಿ ಪ್ರಧಾನಿ ನೂತನ ರೈಲ್ವೆ ನಿಲ್ದಾಣಗಳನ್ನು ಸಾರ್ವಜನಿಕ ಸೇವೆಗೆ ಸಮರ್ಪಿಸಿದರು. ನೈರುತ್ಯ ರೈಲ್ವೆ ವಿಭಾಗದ ಧಾರವಾಡ, ಗದಗ, ಬಾಗಲಕೋಟೆ, ಗೋಕಾಕ ಮತ್ತು ಮುನಿರಾಬಾದ್ ಸೇರಿದಂತೆ ವಿವಿಧ ರೈಲ್ವೆ ನಿಲ್ದಾಣಗಳನ್ನು ಅಮೃತ ಭಾರತ ಸ್ಟೇಷನ್ ಯೋಜನೆಯಡಿ ಪುನಾರಾಭಿವೃದ್ಧಿಗೊಳಿಸಲಾಗಿದೆ. ಆಧುನೀಕರಣಗೊಂಡ ಈ ರೈಲು ನಿಲ್ದಾಣಗಳು ಪ್ರಾದೇಶಿಕ ಸಂಸ್ಕೃತಿ ಮತ್ತು ಪರಂಪರೆಯನ್ನು ಬಿಂಬಿಸುತ್ತದೆ. ವಿಸ್ತರವಾದ ರಸ್ತೆಗಳು, ಉತ್ತಮವಾಗಿ ನಿರ್ಮಿಸಲಾದ ಕೆಳಸೇತುವೆಗಳು, ಪಾದಚಾರಿ ಮೇಲ್ಸೇತುವೆಗಳು, ಆಧುನಿಕ ವಿಶ್ರಾಂತಿ ಕೊಠಡಿಗಳು, ವಿಶಾಲ ಸಂಚಾರ ಪ್ರದೇಶ, ಭವ್ಯವಾದ ಮುಖಮಂಟಪ ಮತ್ತು ಲಿಫ್ಟ್‌ಗಳನ್ನು ಈ ನಿಲ್ದಾಣಗಳು ಹೊಂದಿವೆ. ಈ ರೈಲು ನಿಲ್ದಾಣಗಳನ್ನು ದಿವ್ಯಾಂಗ ಸ್ನೇಹಿಯಾಗಿ ವಿನ್ಯಾಸಗೊಳಿಸಲಾಗಿದೆ. ಉಚಿತ ವೈ-ಫೈ ಸೇವೆಯನ್ನು ಸಹ ಒದಗಿಸಲಿದೆ. ಕಾರ್ಯಕ್ರಮ ಉದ್ದೇಶಿಸಿ ಉದ್ದೇಶಿಸಿ ಮಾತಾನಾಡಿದ ಪ್ರಧಾನಿ ನರೇಂದ್ರ ಮೋದಿ, ದೇಶದ ವಿಮಾನ ನಿಲ್ದಾಣಗಳು, ಬಂದರುಗಳು ಅಭಿವೃದ್ಧಿಗೊಂಡಿವೆ. ಇದೇ ರೀತಿಯಲ್ಲಿ ರೈಲ್ವೆ ನಿಲ್ದಾಣಗಳು ಸಹ ಪುನಶ್ಚೇತನಗೊಳ್ಳುತ್ತಿವೆ. ಹಿಂದಿನ ಸರ್ಕಾರಕ್ಕೆ ಹೋಲಿಸಿದರೆ, ನಾವು ಆರು ಪಟ್ಟು ಹೆಚ್ಚು ಹಣವನ್ನು ರೈಲ್ವೆ ಅಭಿವೃದ್ಧಿಗೆ ಬಳಸುತ್ತಿದ್ದೇವೆ ಎಂದು ಹೇಳಿದರು. ವಂದೇ ಭಾರತ್, ನಮೋ ಭಾರತ್ ರೈಲುಗಳು ಆಧುನಿಕತೆಯ

ಪ್ರತೀಕವಾಗಿವೆ. ರೈಲ್ವೆ ಮೂಲಸೌಕರ್ಯ ಹೆಚ್ಚಿಸಿದ್ದು, ಮಾನವ ರಹಿತ ರೈಲ್ವೆ ಕ್ರಾಸಿಂಗ್ ವ್ಯವಸ್ಥೆಯನ್ನು ಜಾರಿಗೊಳಿಸಿದ್ದೇವೆ. ಬುಲೆಟ್ ರೈಲು ಸೇವೆಗೆ ಒಂದು ವರ್ಷದಲ್ಲಿ ಚಾಲನೆ ನೀಡಲಾಗುವುದು ಎಂದು ತಿಳಿಸಿದರು. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮಾತಾನಾಡಿ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರೈಲ್ವೆ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದೆ. ರೈಲ್ವೆ ವಲಯಕ್ಕೆ ಹೊಸ ಸ್ವರೂಪ ಮತ್ತು ಹೊಸ ಸ್ಪರ್ಶ ನೀಡಿದೆ ಎಂದು ಹೇಳಿದರು. ಅಮೃತ್ ಭಾರತ್ ರೈಲು ನಿಲ್ದಾಣ ಯೋಜನೆಯಡಿ ಆಧುನೀಕರಣಗೊಂಡ ಧಾರವಾಡ ರೈಲು ನಿಲ್ದಾಣ ಉದ್ಘಾಟನಾ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಗವಹಿಸಿದ್ದರು. ಕಾರ್ಯಕ್ರಮ ಉದ್ದೇಶಿ ಮಾತನಾಡಿದ ರಾಜ್ಯಪಾಲರು, ದೇಶದ ನಿರಂತರ ಅಭಿವೃದ್ಧಿಯಲ್ಲಿ ಸುಗಮ ಮತ್ತು ಸಂಘಟಿತ ರೈಲು ಸಾರಿಗೆ ವ್ಯವಸ್ಥೆಯು ಪ್ರಮುಖ ಪಾತ್ರ ವಹಿಸುತ್ತದೆ. ಭಾರತೀಯ ರೈಲ್ವೆ ದೇಶದ ಪ್ರಮುಖ ಸಾರಿಗೆ ಸಾಧನವಾಗಿರುವುದರ ಜೊತೆಗೆ, ದೇಶದ ಆರ್ಥಿಕ ಮತ್ತು ಒಟ್ಟಾರೆ ಅಭಿವೃದ್ಧಿಯ ಬೆನ್ನೆಲುಬಾಗಿದೆ ಎಂದರು.

**ಧ್ವನಿ: ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್**

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಭಾರತೀಯ ರೇಲ್ವೆ ಇಲಾಖೆಗೆ ಕಾಯಕಲ್ಪ ನೀಡಿದ ಫಲವಾಗಿ ಭಾರತೀಯ ರೈಲ್ವೆಯ ೪೦ ಸಾವಿರ ಕಿಲೋ ಮೀಟರ್ ವಿದ್ಯುಧೀಕರಣ ಪೂರ್ಣಗೊಂಡಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಗದಗದಲ್ಲಿಂದು ತಿಳಿಸಿದರು. ಅಮೃತ್ ಭಾರತ್ ರೈಲು ನಿಲ್ದಾಣ ಯೋಜನೆಯಡಿ ಆಧುನೀಕರಣಗೊಂಡ ಗದಗದ ರೈಲು ನಿಲ್ದಾಣ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿದ್ದರು. ಬೆಳಗಾವಿ ರೈಲು ನಿಲ್ದಾಣ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಮುಂಬರುವ ದಿನಗಳಲ್ಲಿ, ಘಟಪ್ರಭಾ, ಚಿಕ್ಕೋಡಿ, ರಾಯಬಾಗ ಸೇರಿದಂತೆ ಜಿಲ್ಲೆಯ ಇತರೆ ಪ್ರಮುಖ ರೈಲು ನಿಲ್ದಾಣಗಳನ್ನು ಆಧುನಿಕ ಸೌಲಭ್ಯಗಳೊಂದಿಗೆ ನವೀಕರಣ ಮಾಡಲಾಗುವುದು ಎಂದು ತಿಳಿಸಿದರು

**ಧ್ವನಿ: ಈರಣ್ಣಾ ಕಡಾಡಿ**

<><><>

ಹಾವೇರಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿ ಪ್ರಾರಂಭಿಸಲಾದ ಪ್ರಧಾನಮಂತ್ರಿ ಭಾರತೀಯ ಜನೌಷಧ ಕೇಂದ್ರವನ್ನು ಸ್ಥಗಿತಗೊಳಿಸುವಂತೆ ರಾಜ್ಯ ಸರ್ಕಾರ ಹೊರಡಿಸಿದ ಆದೇಶ ರದ್ದುಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಈ ಕುರಿತು ಪತ್ರ ಬರೆದಿರುವ ಅವರು, ಪ್ರಧಾನಮಂತ್ರಿ ಜನೌಷಧ ಕೇಂದ್ರಗಳನ್ನು ಸರ್ಕಾರಿ ಆಸ್ಪತ್ರೆಗಳ ಆವರಣಗಳಲ್ಲಿ ಸ್ಥಗಿತಗೊಳಿಸುವುದರಿಂದ ಸಾಮಾನ್ಯ ಬಡ ಜನರಿಗೆ ಉತ್ತಮ ಗುಣಮಟ್ಟದ ಜನರಿಕ್ ಔಷಧಗಳನ್ನು, ಕಡಿಮೆ ಹಾಗೂ ಕೈಗೆಟುಕುವ ದರಗಳಲ್ಲಿ ದೊರಕಿಸುವ ಕೇಂದ್ರ ಸರ್ಕಾರದ ಉದ್ದೇಶಕ್ಕೆ ಅಡ್ಡಿಪಡಿಸಿದಂತಾಗುತ್ತದೆ. ಆದ್ದರಿಂದ ಈ ವಿಷಯದ ಬಗ್ಗೆ ಪರಿಶೀಲಿಸಿ, ಸಂಬಂಧಪಟ್ಟ ಅಧಿಕಾರಿಗಳಿಗೆ ಕೂಡಲೇ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಬೇಕೆಂದು ಕೋರಿದ್ದಾರೆ.

<><><>

ಖಾಸಗಿ ಅನುದಾನ ರಹಿತ ಶಾಲೆಗಳು ಸರ್ಕಾರದ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು. ಸರ್ಕಾರದ ನಿಯಮಾವಳಿ ಉಲ್ಲಂಘಿಸುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು

ಎಂದು ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು. ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಖಾಸಗಿ ಅನುದಾನರಹಿತ ಶಾಲೆಗಳ ಆಡಳಿತ ಮಂಡಳಿಗಳು ತಮ್ಮ ಜವಾಬ್ದಾರಿಗಳನ್ನು ಮರೆಯಬಾರದು. ಸರ್ಕಾರದ ನಿಯಮಗಳನ್ನು ಪಾಲನೆ ಮಾಡಬೇಕು. ಯಾವುದೇ ಕಾರಣಕ್ಕೂ ನಿಯಮಗಳ ಉಲ್ಲಂಘನೆ ಮಾಡಬಾರದು. ಒಂದು ವೇಳೆ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರದ ನಿಯಮಾವಳಿ ಉಲ್ಲಂಘನೆ ಕುರಿತು ದೂರು ಬಂದರೆ ತಕ್ಷಣವೇ ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು.

<><><>

ರಾಜ್ಯದ ಜೇನುತುಪ್ಪಕ್ಕೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಾನ್ಯತೆ ಹಾಗೂ ಮಾರುಕಟ್ಟೆ ಒದಗಿಸಲು ತೋಟಗಾರಿಕಾ ಇಲಾಖೆಯಿಂದ 'ಝೇಂಕಾರ'- ಜೀವನೋಲ್ಲಾಸಕ್ಕೆ ಜೇನು ಎಂಬ ಬ್ರಾಂಡ್ ನೋಂದಾಯಿಸಲಾಗಿದೆ ಎಂದು ತೋಟಗಾರಿಕಾ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಇಲಾಖಾ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಜೇನು ಉದ್ಯಮಕ್ಕೆ ಹೆಚ್ಚಿನ ಮಾನ್ಯತೆ ನೀಡಲಾಗಿದ್ದು, ಇಲಾಖೆಯಿಂದ ಉತ್ಪಾದಕರಿಗೆ ಸಾಕಷ್ಟು ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದರು. ಮೈಸೂರಿನಲ್ಲಿ ತೋಟಗಾರಿಕೆ ಇಲಾಖೆಯಡಿ ೧೫ ಎಕರೆ ವಿಸ್ತೀರ್ಣದ ಲಿಂಗಾಂಬುಂಧಿ ಸಸ್ಯ ಶಾಸ್ತ್ರೀಯ ತೋಟವನ್ನು ಲೋಕಾರ್ಪಣೆಗೊಳಿಸಲಾಗಿದ್ದು, ಮೈಸೂರು ಮಲ್ಲಿಗೆ, ನಂಜನಗೂಡು ರಸಬಾಳೆ ಮತ್ತು ಮೈಸೂರು ವೀಳ್ಯದೆಲೆಗಳ ಸಂರಕ್ಷಣೆಗಾಗಿ ೧೪ ಹೆಕ್ಟೇರ್ ಪ್ರದೇಶದಲ್ಲಿ ಪ್ರಾತ್ಯಕ್ಷಿಕೆಗಳನ್ನು ಹಾಗೂ ೧೭೫ ರೈತರಿಗೆ ತರಬೇತಿಗಳನ್ನು ನೀಡಲಾಗಿದೆ ಎಂದು ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಮಾಹಿತಿ ನೀಡಿದರು.

<><><>

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇದೇ ತಿಂಗಳ ೨೫ ರಂದು ಆಕಾಶವಾಣಿಯ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶ ಬಾಂಧವರೊಂದಿಗೆ ತಮ್ಮ ಆಲೋಚನೆಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಆಕಾಶವಾಣಿಯ ಮನ್ ಕಿ ಬಾತ್ ನ ೧೨೨ ನೇ ಸಂಚಿಕೆಯಾಗಲಿದೆ. ಟೋಲ್-ಫ್ರೀ ಸಂಖ್ಯೆ ೧೮೦೦-೧೧-೭೮೦೦ ಮೂಲಕ ಮನದ ಮಾತಿನ ಸಂಚಿಕೆಗೆ ಜನರು ತಮ್ಮ ಆಲೋಚನೆ, ಸಲಹೆಗಳನ್ನು ಸಲ್ಲಿಸಬಹುದು.

<><><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಮೂರು ದಿನಗಳ ಕಾಲ ಸತತವಾಗಿ ಸುರಿದ ಮಳೆ ಇಂದು ತುಸು ಕಡಿಮೆಯಾಗಿದೆ. ಬೆಳಗ್ಗಿನಿಂದ ಜಿಲ್ಲೆಯಾದ್ಯಂತ ಸಾಧಾರಣ ಮಳೆಯಾಗುತ್ತಿದೆ. ಕಳೆದ ಒಂದು ತಿಂಗಳಿನಲ್ಲಿ ಜಿಲ್ಲೆಯಲ್ಲಿ ಮಳೆಯಿಂದಾಗಿ ಸಾಕಷ್ಟು ಹಾನಿಯೂ ಆಗಿದೆ. ಏಪ್ರಿಲ್ ೧ರಿಂದ ಮೇ ೨೧ ರವರೆಗೆ ಒಟ್ಟು ೧೭೪ ಮನೆಗಳಿಗೆ ಹಾನಿಯಾಗಿದೆ. ಈ ಪೈಕಿ ೭ ಮನೆಗಳು ಸಂಪೂರ್ಣ ಹಾನಿಗೀಡಾಗಿವೆ. ೧.೪೯೭ ಹೆಕ್ಟೇರ್ ಪ್ರದೇಶದಲ್ಲಿನ ತೋಟಗಾರಿಕಾ ಬೆಳೆ ನಾಶವಾಗಿದೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಪ್ರಾಕೃತಿಕ ವಿಕೋಪ ಎದುರಿಸಲು ಅಧಿಕಾರಿಗಳು ಸನ್ನದ್ಧರಾಗಿರಬೇಕು. ಯಾವುದೇ ಹಾನಿ ಸಂಭವಿದರೂ ತಕ್ಷಣ ಧಾವಿಸಿ, ಸೂಕ್ತ ಪರಿಹಾರ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

<><><>

ಈ ವರ್ಷ ನೈಋತ್ಯ ಮುಂಗಾರು ಬೇಗ ಆರಂಭವಾಗಲಿದ್ದು, ಎರಡು ಮೂರು ದಿನಗಳ ಒಳಗೆ ಕೇರಳ ಪ್ರವೇಶಿಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಮಧ್ಯೆ ಕರ್ನಾಟಕದ ಕರಾವಳಿ ಭಾಗ, ಮಹಾರಾಷ್ಟ್ರ, ಕೇರಳ, ಗೋವಾ ಸೇರಿದಂತೆ ಹಲವೆಡೆ ಮುಂದಿನ ಐದು ದಿನ ಭಾರೀ ಮಳೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>